**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ**: RTI Online Portal ಪ್ರಾರಂಭಿಸುವ ಬಗ್ಗೆ.

**ಓದಲಾಗಿದೆ** : ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಉನ್ನತ ಮಟ್ಟದ ಸಮಿತಿಯ ದಿನಾಂಕ: 03-03-2018 ಮತ್ತು 25-08-2018ರ ಸಭೆಯ ನಡವಳಿಗಳು.

******

**ಪ್ರಸ್ತಾವನೆ:**

ಮೇಲೆ ಓದಲಾದ ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಉನ್ನತ ಮಟ್ಟದ ಸಮಿತಿಯ ದಿನಾಂಕ: 03-03-2018 ಮತ್ತು 25-08-2018ರ ಸಭೆಗಳಲ್ಲಿ ಕೇಂದ್ರ ಸರ್ಕಾರದ ಮಾದರಿಯಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರಡಿ ಮಾಹಿತಿ ಕೋರಿಕೆ ಅರ್ಜಿಗಳನ್ನು ಮತ್ತು ಮೊದಲ ಮೇಲ್ಮನವಿಗಳನ್ನು RTI Online Portal ಮೂಲಕ ಸ್ವೀಕರಿಸಲು ಹಾಗೂ ಇತ್ಯರ್ಥಪಡಿಸಲು ರಾಜ್ಯದ ಎಲ್ಲಾ ಇಲಾಖೆಗಳಲ್ಲಿ RTI Online ವ್ಯವಸ್ಥೆಯನ್ನು ಜಾರಿಗೆ ತರುವಂತೆ ತೀರ್ಮಾನಿಸಲಾಗಿದೆ.

RTI Online ವ್ಯವಸ್ಥೆಯನ್ನು ಜಾರಿಗೆ ತರುವ ಸಂಬಂಧ NIC ಸಂಸ್ಥೆಯು ಈಗಾಗಲೇ RTI Online Portal ಅನ್ನು ಸಿದ್ಧಪಡಿಸಿದೆ. ಈ ವ್ಯವಸ್ಥೆಯನ್ನು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಮತ್ತು ಅವುಗಳ ಆಡಳಿತದ ವ್ಯಾಪ್ತಿಯಲ್ಲಿ ಬರುವ ಕ್ಷೇತ್ರ ಇಲಾಖೆಗಳಲ್ಲಿ, ನಿಗಮ ಮಂಡಳಿಗಳಲ್ಲಿ, ಆಯೋಗಗಳಲ್ಲಿ ಮತ್ತು ಸ್ವಾಯತ್ತ ಸಂಸ್ಥೆಗಳಲ್ಲಿ ಅಳವಡಿಸಬೇಕಾಗಿರುತ್ತದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 162 ಆರ್ ಟಿಐ 2016, ಬೆಂಗಳೂರು,**
**ದಿನಾಂಕ:10-10-2019**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರಡಿ ಮಾಹಿತಿ ಕೋರಿಕೆ ಅರ್ಜಿಗಳನ್ನು ಮತ್ತು ಮೊದಲ ಮೇಲ್ಮನವಿಗಳನ್ನು ಆನ್ ಲೈನ್ (Online) ಮೂಲಕ ಸ್ವೀಕರಿಸಲು ಹಾಗೂ ಇತ್ಯರ್ಥಪಡಿಸಲು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಮತ್ತು ಅವುಗಳ ಆಡಳಿತದ ವ್ಯಾಪ್ತಿಯಲ್ಲಿ ಬರುವ ಕ್ಷೇತ್ರ ಇಲಾಖೆಗಳಲ್ಲಿ, ನಿಗಮ ಮಂಡಳಿಗಳಲ್ಲಿ, ಆಯೋಗಗಳಲ್ಲಿ ಮತ್ತು ಸ್ವಾಯತ್ತ ಸಂಸ್ಥೆಗಳಲ್ಲಿ RTI Online ವ್ಯವಸ್ಥೆಯನ್ನು ಜಾರಿಗೆ ತರಲು ಆದೇಶಿಸಿದೆ.

RTI Online Portalನ ಸಂಚಾಲನೆ ಮತ್ತು ಕಾರ್ಯನಿರ್ವಹಣೆ (Hosting, Maintenance and Execution)ಯನ್ನು ಮಾಡುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ)ಗೆ ಆದೇಶಿಸಲಾಗಿದೆ.

RTI Online ವ್ಯವಸ್ಥೆಯ ಜಾರಿಗಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮತ್ತು ಮೊದಲ ಮೇಲ್ಮನವಿ ಪ್ರಾಧಿಕಾರಿಗಳ ಮಾಹಿತಿಗಳನ್ನು ಕ್ರೋಢೀಕರಿಸಲು ಹಾಗೂ ಸಿಬ್ಬಂದಿ ಮತ್ತು ಆಡಳಿತ

ಸುಧಾರಣೆ ಇಲಾಖೆ (ಇ-ಆಡಳಿತ) ಯೊಂದಿಗೆ ಸಮನ್ವಯಕ್ಕಾಗಿ ಪ್ರತಿಯೊಂದು ಸಚಿವಾಲಯ ಇಲಾಖೆಯು ತಮ್ಮ ಇಲಾಖೆಯ ಅಧೀನ ಕಾರ್ಯದರ್ಶಿ ಅಥವಾ ಅದಕ್ಕೂ ಮೇಲ್ಪಟ್ಟ ಹುದ್ದೆಯ ಒಬ್ಬ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸುವಂತೆ ಆದೇಶಿಸಿದೆ.

ಪ್ರತಿಯೊಂದು ಸಚಿವಾಲಯ ಇಲಾಖೆಯು ನೇಮಿಸುವ ನೋಡಲ್ ಅಧಿಕಾರಿಯ ಹೆಸರು, ಪದನಾಮ, ವಿಳಾಸ, ದೂರವಾಣಿ ಸಂಖ್ಯೆ, ಇ-ಮೇಲ್ ಐಡಿ ಇತ್ಯಾದಿಗಳ ಸಂಪೂರ್ಣ ಮಾಹಿತಿಗಳನ್ನು ದಿನಾಂಕ: 22-10-2019 ರೊಳಗಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ) ಇವರಿಗೆ ಕಳುಹಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

R. Puttaram 10/10/19
(ಆರ್. ಪುಟ್ಟರಾಮು)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ,
(ಜನಸ್ಪಂದನ)

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳು, ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಎಲ್ಲಾ ಉಪಮುಖ್ಯಮಂತ್ರಿಗಳ/ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಆಸುಇ (ಇ-ಆಡಳಿತ), ಬೆಂಗಳೂರು.
7. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಆಸುಇ (ಜನಸ್ಪಂದನ), ಬೆಂಗಳೂರು.
9. ಸ್ಟೇಟ್ ಇನ್ಫಾರ್ಮೆಟಿಕ್ಸ್ ಆಫೀಸರ್, ರಾಷ್ಟ್ರೀಯ ಮಾಹಿತಿ ಕೇಂದ್ರ, (ಎನ್ ಐ ಸಿ) 7ನೇ ಮಹಡಿ, ಚಿಕ್ಕ ಗೋಪುರ, ವಿ.ವಿ. ಗೋಪುರ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು-01.
10. ಎಲ್ಲಾ ಪ್ರಾದೇಶಿಕ ಆಯುಕ್ತರು.
11. ಎಲ್ಲಾ ಜಿಲ್ಲಾಧಿಕಾರಿಗಳು.
12. ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
13. ಎಲ್ಲಾ ಇಲಾಖಾ ಮುಖ್ಯಸ್ಥರು.
14. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.
15. ಕಚೇರಿ ಪ್ರತಿ.